# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 633 (801) |
| ಸದಸ್ಯರ ಹೆಸರು | ಶ್ರೀ ಕೆ ಅಬ್ದುಲ್ ಬಜ್ಬಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 13.07.2023 |
| ಉತ್ತರಿಸುವ ಸಚಿವರು | ಮಾನ್ಯ ಮುಖ್ಯಮಂತ್ರಿಗಳು |

| ಕ್ರಮ ಸಂಖ್ಯೆ | ಪ್ರಶ್ನೆ | ಕ್ರಮ |
|---|---|---|
| ಅ | ಪ್ರಸ್ತುತ ರಾಜ್ಯದ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಕೆ.ಎ.ಎಸ್ ಗೆಜೆಟೆಡ್ ಪ್ರೊಬೇಷನರಿ ಗ್ರೂಪ್ 'ಎ' ಮತ್ತು ಗ್ರೂಪ್ 'ಬಿ' ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು) | ರಾಜ್ಯದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳಲ್ಲಿ ಆರ್ಥಿಕ ಇಲಾಖೆಯು ಸಹಮತಿಸಿರುವಂತೆ 2023-24ನೇ ಸಾಲಿಗೆ ಒಟ್ಟು 384 ಹುದ್ದೆಗಳು ಮತ್ತು 2024-25ನೇ ಸಾಲಿಗೆ 80 ಹುದ್ದೆಗಳ ಇಲಾಖಾವಾರು ಮತ್ತು ಹುದ್ದೆವಾರು ಮಾಹಿತಿಯನ್ನು ಅನುಬಂಧ-1ರಲ್ಲಿ ನೀಡಿದೆ |
| ಆ | ಖಾಲಿಯಿರುವ ಹುದ್ದೆಗಳ ಬಗ್ಗೆ ವಿವಿಧ ಇಲಾಖೆಗಳಿಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಮಾಹಿತಿ ಕೋರಿ ಪತ್ರ ಬರೆದಿದ್ದರೂ ಇಲಾಖೆಗಳು ಮಾಹಿತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ರಾಜ್ಯದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ಮಾಹಿತಿಯನ್ನು ಸಂಬಂಧಪಟ್ಟ ಇಲಾಖೆಗಳಿಂದ ಪಡೆದು 2023-24ನೇ ಸಾಲಿಗೆ ಕರ್ನಾಟಕ ಲೋಕಸೇವಾ ಆಯೋಗಕ್ಕೆ ನೇಮಕಾತಿಗಾಗಿ ಒಟ್ಟು 384 ಹುದ್ದೆಗಳನ್ನು ಬಿಡುಗಡೆ ಮಾಡಿದೆ. |
| ಇ | 2020ನೇ ಸಾಲಿನಲ್ಲಿ 2017ನೇ ಸಾಲಿನ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ ಹಾಗೂ ಪ್ರಸ್ತುತ ವಯೋಮಿತಿ ಮೀರಿರುವ ಅಭ್ಯರ್ಥಿಗಳಿಗೆ ಮುಂಬರುವ ಹೊಸ ನೇಮಕಾತಿಗೆ ಅರ್ಜಿ ಸಲ್ಲಿಸುವ ಅವಕಾಶ ಕಲ್ಪಿಸುವ ಆಲೋಚನೆ ಸರ್ಕಾರಕ್ಕೆ ಇದೆಯೇ? (ವಿವರ ನೀಡುವುದು) | 2023-24ನೇ ಸಾಲಿನಲ್ಲಿ ಕರ್ನಾಟಕ ಲೋಕಸೇವಾ ಆಯೊಗವು ಗೆಜೆಟೆಡ್ ಪ್ರೊಬೇಷನರ್ಸ್ ಗ್ರೂಪ್-ಎ ಮತ್ತು ಗ್ರೂಪ್-ಬಿ ರಿಕ್ತ ಸ್ಥಾನಗಳನ್ನು ತುಂಬಲು ಹೊರಡಿಸುವ ಅಧಿಸೂಚನೆಯಲ್ಲಿ ಅರ್ಹರಿರುವ ಎಲ್ಲಾ ಅಭ್ಯರ್ಥಿಗಳಿಗೆ 3 ವರ್ಷಗಳ ವಯೋಮಿತಿ ಸಡಿಲಿಸಿ ಆದೇಶ ಹೊರಡಿಸಲಾಗಿದ್ದು, ಪ್ರತಿಯನ್ನು ಅನುಬಂಧ-2ರಲ್ಲಿ ನೀಡಿದೆ. |

ಸಂಖ್ಯೆ:ಸಿಆಸುಇ 67 ಎಸ್ಎಸ್‌ಸಿ 2023

(ಸಿದ್ದರಾಮಯ್ಯ)
ಮುಖ್ಯಮಂತ್ರಿ